# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಕೆ ಅಬ್ದುಲ್ ಜಬ್ಬರ್ (ವಿಧಾನ ಸಭಾ ಕ್ಷೇತ್ರ)

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 1005 (1205)

ಉತ್ತರಿಸಬೇಕಾದ ದಿನಾಂಕ : 13.03.2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮ ಪಂಚಾಯತ್ ಮಟ್ಟದಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಯಾವ-ಯಾವ ರೀತಿಯ ಯೋಜನೆಗಳನ್ನು ಕೈಗೊಳ್ಳಲಾಗಿದೆ; ಸದರಿ ಯೋಜನೆಗಳು ಯಾವ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ; | ಗ್ರಾಮ ಪಂಚಾಯತ್ ಮಟ್ಟದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ಕೇಂದ್ರ ಸರ್ಕಾರವು 2019ರಲ್ಲಿ ಜಲ ಜೀವನ್ ಮಿಷನ್ ಯೋಜನೆಯನ್ನು ಜಾರಿಗೆ ತರಲಾಗಿರುತ್ತದೆ. ಈ ಯೋಜನೆಯಡಿ ಪ್ರತಿಯೊಂದು ಗ್ರಾಮೀಣ ಮನೆಗಳಿಗೆ ಕಾರ್ಯಾತ್ಮಕ ನಳ ಸಂಪರ್ಕ (FHTC) ಒದಗಿಸುವ ಗುರಿ ಹೊಂದಲಾಗಿದೆ.<br>ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಪ್ರತಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSC) ರಚಿಸಲಾಗಿರುತ್ತದೆ.<br>ಈ ಸಮಿತಿಯು ನೀರು ಸರಬರಾಜು ವ್ಯವಸ್ಥೆಯ ನಿರ್ವಹಣೆ ಮತ್ತು ಮೇಲ್ವಿಚಾರಣೆ ನಡೆಸುತ್ತದೆ. ಪ್ರತಿ ಗ್ರಾಮ ಪಂಚಾಯತ್ ಗ್ರಾಮ ಕ್ರಿಯಾ ಯೋಜನೆ (Village Action Plan) ತಯಾರಿಸಿ ಗ್ರಾಮ ಸಭೆಯಲ್ಲಿ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೊಳ್ಳುತ್ತದೆ. ನೀರಿನ ಗುಣಮಟ್ಟ ಕಾಪಾಡಲು ತರಬೇತಿ ಪಡೆದವರು Field Test Kit ಮೂಲಕ ನಿಯಮಿತವಾಗಿ ನೀರು ಪರೀಕ್ಷಿಸಲಾಗುತ್ತಿದೆ.<br>ತುರ್ತು ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ: ರಾಜ್ಯದಲ್ಲಿ ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಹಾಲಿ ಇರುವ ಬಹುತೇಕ ಜಲಮೂಲಗಳು ಬತ್ತಿಹೋಗಿ ಗ್ರಾಮದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ<br>• ಮೊದಲ ಆದ್ಯತೆಯಾಗಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಮುಖಾಂತರ ಪಡೆದು ಕುಡಿಯುವ ನೀರು ಒದಗಿಸುವಂತೆ ಸೂಚಿಸಲಾಗಿರುತ್ತದೆ.<br>• ಅಗತ್ಯವಿದ್ದಲ್ಲಿ, ಟ್ಯಾಂಕರ್‌ಗಳ ಮೂಲಕ ನೀರನ್ನು ಸರಬರಾಜು ಮಾಡುವಂತೆ ಸೂಚಿಸಲಾಗಿರುತ್ತದೆ.<br>• ಕೊಳವೆ ಬಾವಿಗಳನ್ನು ಫ್ಲಷಿಂಗ್ (Flushing) ಮಾಡಿ ಆಳಗೊಳಿಸಲು (Deepening) ಹಾಗೂ Hydrofracturing ಮಾಡಿ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.<br>• ಮುಂದುವರೆದು ಅನಿವಾರ್ಯ ಸಂದರ್ಭದಲ್ಲಿ ಕೊಳವೆಬಾವಿಗಳನ್ನು ಕೊರೆಯುವುದು ಅತ್ಯಗತ್ಯವೆಂದು ಕಂಡು ಬಂದಲ್ಲಿ, ಸಂಬಂಧಪಟ್ಟ ಜಿಯಾಲಜಿಸ್ಟ್ ವರದಿಯನುಸಾರ ಸೂಕ್ತ ಕ್ರಮ |

| | | |
|---|---|---|
| | | ಕೈಗೊಂಡು ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಇತರೇ ಅವಶ್ಯ ಅಂಶಗಳನ್ನು ಒಳಗೊಂಡ ಕಾಮಗಾರಿಗಳನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.<br><br>ಸದರಿ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ ಜಿಲ್ಲಾ ಮಟ್ಟದ Taskforce ಸಮಿತಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದ ನಂತರ, ಸಂಬಂಧಿಸಿದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಕ್ರಿಯಾ ಯೋಜನೆಗೆ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಗ್ರಾಮ ರಸ್ತೆ ಅಭಿವೃದ್ಧಿಗೆ ಕೈಗೊಂಡಿರುವ ಯೋಜನೆಗಳು ಯಾವುವು; ಸದರಿ ಯೋಜನೆಗಳ ಪ್ರಸ್ತುತ ಸ್ಥಿತಿ ಏನು; | ಗ್ರಾಮೀಣಾಭಿವೃದ್ಧಿ (ರಸ್ತೆ ಮತ್ತು ಸೇತುವೆ) ಶಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ.<br><br>1.ಲೆ.ಶೀ: 5054 ಮುಖ್ಯಮಂತ್ರಿಗಳ ವಿಶೇಷ ಯೋಜನೆ<br>2. ಲೆ.ಶೀ: 5054 ಮಳೆ ಪರಿಹಾರ<br>3. ಲೆ.ಶೀ: 5054 ಎಸ್‌ಸಿಪಿ/ಟಿಎಸ್‌ಪಿ<br>4. ಲೆ.ಶೀ: 3054 ಲಿಂಕ್ ಡಾಕ್ಯೂಮೆಂಟ್<br>5. ಲೆ.ಶೀ: 3054 ಲಮ್‌ಸಮ್<br>6. ಲೆ.ಶೀ: 3054 ಟಾಸ್ಕ್ ಫೋರ್ಸ್<br>7.ಕೇಂದ್ರ ಪುರಸ್ಕೃತ ಯೋಜನೆಯಾದ ಪಿ.ಎಂ.ಜಿ.ಎಸ್.ವೈ-ಖ,<br>8. ಪಿ.ಎಂ.ಜನ್‌ಮನ್,<br>9. ಪಿ.ಎಂ.ಜಿ.ಎಸ್.ವೈ ಆವರ್ತಕ ನಿರ್ವಹಣೆ<br>10.ರಾಜ್ಯ ಪುರಸ್ಕೃತ ಯೋಜನೆಯಾದ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ<br>11. ಕಲ್ಯಾಣ ಪಥ ಯೋಜನೆ<br><br>ಸದರಿ ಯೋಜನೆಗಳಡಿ ರಸ್ತೆ ದುರಸ್ತಿ/ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಕಾಮಾನಿಗಳ ಪ್ರಗತಿಗನುಗುಣವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. |
| ಇ) | ಗ್ರಾಮೀಣ ಪ್ರದೇಶಗಳಲ್ಲಿ ಡಿಜಿಟಲ್ ಸಂಪರ್ಕ ಮತ್ತು ಇ-ಪಂಚಾಯತ್ ವ್ಯವಸ್ಥೆಯ ಪ್ರಗತಿ ಹೇಗೆ ನಡೆಯುತ್ತಿದೆ; | ಪ್ರಸ್ತುತ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಕೇಂದ್ರ ಸರ್ಕಾರದ Bharat Net ಯೊಜನೆಯಡಿ internet ಒದಗಿಸುವ ಮೂಲಕ ಡಿಜಿಟಲ್ ಸಂಪರ್ಕವನ್ನು ಕಲ್ಪಿಸಲಾಗಿದೆ ಹಾಗೂ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಹಲವಾರು ಯೋಜನೆಗಳಿಗೆ ಸಂಬಂಧಿಸಿದ ತಂತ್ರಾಂಶಗಳಾದ ಪಂಚತಂತ್ರ 2.0, ಇಇ-ಸ್ವತ್ತು 2.0, ಗಾಂಧಿ ಸಾಕ್ಷಿ ಕಾರಕ 2.0, ಇ-ಬೆಳಕು, ಇ-ಗ್ರಾಮ ಸ್ವರಾಜ್, ನರೇಗಾ ಮತ್ತು SBM-Gಗಳನ್ನು ಅನುಷ್ಠಾನಗೊಳಿಸಲಾಗಿದೆ.<br>Bhart Net ಹಂತ 4 ಯೋಜನೆಯಡಿ ಗ್ರಾಮಗಳಿಗೂ ಸಹ internet ಒದಗಿಸುವ ಮೂಲಕ ಡಿಜಿಟಲ್ ಸಂಪರ್ಕವನ್ನು ಕಲ್ಪಿಸುವ ಕೇಂದ್ರ |

| | | |
|---|---|---|
| | | ಸರ್ಕಾರದಿಂದ ಕ್ರಮವಹಿಸಲಾಗುತ್ತಿದೆ. |
| ಈ) | ಗ್ರಾಮ ಸ್ವಚ್ಛತಾ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡಲಾಗುತ್ತಿದೆಯೇ? (ವಿವರಣೆ ನೀಡುವುದು) | ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಛತೆಯನ್ನು ಕಾಪಾಡಲು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಗ್ರಾಮ ಪಂಚಾಯಿತಿಗಳಲ್ಲಿ 'ಸ್ವಚ್ಛ ಸಂಕೀರ್ಣ' ಘಟಕಗಳನ್ನು ನಿರ್ಮಿಸಲಾಗಿದ್ದು, ತ್ಯಾಜ್ಯ ಸಂಗ್ರಹಣೆ, ಹಾಗೂ ವಿಲೇವಾರಿಯನ್ನು GPLF (Gram Panchayat Level Federation) ಸಂಘಗಳ ಮೂಲಕ ನಿರ್ವಹಿಸಲಾಗುತ್ತಿದೆ. |

RDW&SD/144/CE/Technical/2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು